# <u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ</u>

## <u>ಕೆ ಆರ್ ನಗರ.</u>

## <u>ಸಿ.ಸಿ. ನಂ. 38/2026</u>

ಪಿರ್ಯಾದಿ ಃ ಸರ್ಕಾರದ ಪರ ಕೆ ಆರ್ ನಗರ ಪೋಲೀಸ್ ಠಾಣೆ

ಃವಿರುದ್ಧ ಃ

ಆರೋಪಿ ಃ ಅಬ್ದುಲ್ ರಹೀಮ್ ಬಿನ್ ಶಫಿ ಅಹಮದ್,
25 ವರ್ಷ
ವಾಸಃ ಮೈಸೂರು.

## <u>ದೋಷಾರೋಪಣೆ</u>

ಶ್ರೀ ಚಂದನ್.ಎಸ್ ಬಿ.ಕಾಮ್., ಎಲ್.ಎಲ್.ಬಿ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ನ್ಯಾಯಿಕ ದಂಡಾಧಿಕಾರಿ ನಾಯಾಧೀಶರು, ಕೆ.ಆರ್.ನಗರ ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಈ ಕೆಳಗಿನಂತೆ ದೋಷಾರೋಪಿಸುವುದೇನೆಂದರೆಃ

ದಿನಾಂಕಃ 10-05-2025 ರಂದು ರಾತ್ರಿ ಸುಮಾರು 10.15 ಗಂಟೆ ಸಮಯದಲ್ಲಿ ಕೆ ಆರ್.ನಗರ ಪೊಲೀಸ್ ಠಾಣಾ ಸರಹದ್ದು ಹಂಪಾಪುರ ಗ್ರಾಮದಲ್ಲಿರುವ ಖಬರಸ್ಥಾನ ಹಾಗೂ ರೈಸ್ ಮಿಲ್ ನಡುವೆ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 373 ಹಾಸನ-ಮೈಸೂರು ರಸ್ತೆಯಲ್ಲಿ ಆರೋಪಿಯಾದ ನೀವು ವಾಹನ ಸಂಖ್ಯೆ ಕೆಎ-09-ಎಚ್ ಯು 6091 ಟಿವಿಎಸ್ ಸ್ಕೂಟರ್ ನಲ್ಲಿ ಮೈಸೂರಿನಿಂದ ತಮ್ಮ ಮನೆ ಭೇರ್ಯಾ ಗ್ರಾಮಕ್ಕೆ ಸಂಬಂಧಿಕ ಮನೆಗೆ ಹೋಗಲು ಕೆ ಆರ್ ನಗರ ಮಾರ್ಗವಾಗಿ ಹೋಗುವಂತ ಸಮಯದಲ್ಲಿ ಸ್ಕೂಟರ್ ನ್ನು ರಸ್ತೆಯಲ್ಲಿ ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಅಡ್ಡಾದಿಡ್ಡಿಯಾಗಿ ಸ್ಕೂಟರ್ ನ್ನು ಚಲಾಯಿಸಿಕೊಂಡು ಬಂದುಎ ರಸ್ತೆಯಲ್ಲಿ ಹಮ್ಸ ನ್ನು ನೋಡದೇ ಬ್ರೇಕ್ ಹಾಕಿದಾಗ ಸ್ಕೂಟರ್ ಸ್ಕೀಡ್ ಆಗಿ ಸ್ಕೂಟರ್ ಸಮೇತವಾಗಿ ರಸ್ತೆ ಬಿದ್ದು ಆರೋಪಿಯಾದ ನಿಮ್ಮ ತಲೆಯ ಭಾಗಕ್ಕೆ, ಮೈಕೈಗೆ ಗಾಯಗಳುಂಟಾಗಿರುತ್ತವೆ. ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ಅಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಕೊನೆಯದಾಗಿ ಮೇಲೆ ಹೇಳಿದ ತಾರೀಖು, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಅಧಿಕೃತವಾಗಿ ವಾಹನಾ ಚಾಲನಾ ಪರವಾನಗಿ ಇಲ್ಲದೇ ಇದ್ದರೂ ಸಹ ವಾಹನ ಚಾಲನೆ ಮಾಡಿದ್ದು ಆ ಮೂಲಕ ಭಾರತೀಯ ಮೋಟಾರು ವಾಹನ ಕಾಯ್ದೆ **ಕಲಂ 181** ಸಹವಾಚನ ಕಲಂ 3 ರಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಪ್ರಃ 1) ಕನ್ನಡದಲ್ಲಿ ಓದಿ ಹೇಳಿದ ಮೇಲಿನ ದೋಷಾರೋಪಣೆ ಅರ್ಥವಾಯಿತೇ?
ಉಃ

ಪ್ರಃ 2) ಅಪರಾಧವನ್ನು ಒಪ್ಪಿಕೊಳ್ಳುವಿರೋ ಅಥವಾ ಸಾಕ್ಷಿಗಳ ವಿಚಾರಣೆಯಾಗ ಬಯಸುವಿರಾ?
ಉಃ

ಆರೋಪಿಯ ವಿರುದ್ಧ ದೋಷಾರೋಪಣೆ ರಚಿಸಿ ನೇರವಾಗಿ ಓದಿ ತಿಳಿಸಿದ ನಂತರ ಆತನು ಕೊಟ್ಟ ಉತ್ತರವನ್ನೇ ಸರಿಯಾಗಿ ಪಡೆದುಕೊಳ್ಳಲಾಯಿತೆಂದು ದೃಢೀಕರಿಸಿದೆ.

ದಿಃ 19-01-2026

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ.ಗಳು,
ಕೆ ಆರ್ ನಗರ.